SC: 36/2020
PW:05 CW: 12

ಕರ್ನಾಟಕ ಸರ್ಕಾರ (ಸಿ.ಆರ್.ಪಿ67)

| ಹೇಳಿಕೆ ಹಾಳೆ<br>ಆರ್.ಪಿ. ಸಂಖ್ಯೆ57<br>ನಮೂನೆ ಸಂಖ್ಯೆ4<br>(ಸಿವಿಲ್) |
|---|

## 3 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಬಳ್ಳಾಪುರ

## ಸತ್ರ ಪ್ರಕರಣ ಸಂಖ್ಯೆಃ 36/2020

| PW | 05 |
|---|---|
| CW | 12 |

**ಸಾಕ್ಷಿಯನ್ನು ಕರೆಯಿಸಿ ಸತ್ಯ ಬೋಧನೆ ಮಾಡಿ ಪ್ರಮಾಣೀಕರಿಸಿದ ದಿನಾಂಕ** 21.07.2026.

| | | |
|---|---|---|
| ಸಾಕ್ಷಿಯ ಹೆಸರು | : | ಸಿ. ನಾರಾಯಣಸ್ವಾಮಿ |
| ತಂದೆಯ/ಗಂಡನ ಹೆಸರು | : | ಲೇಟ್. ಚಿನ್ನಪ್ಪ |
| ವಯಸ್ಸು | : | 60 ವರ್ಷ |
| ಉದ್ಯೋಗ | : | ನಿವೃತ್ತ ಪಿ.ಎಸ್.ಐ |
| ವಾಸಸ್ಥಳ | : | ವೇಮಗಲ್, ಕೋಲಾರ |

**ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ'**

ನಾನು ಡಿಸೆಂಬರ್ 2015 ರಿಂದ 2021 ಮೇ ತಿಂಗಳರವರೆಗೆ ಬಾಗೇಪಲ್ಲಿ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ , ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ .

ದಿನಾಂಕ ಃ 04.05.2019 ರಂದು ಚಾಸಾ-1 ರವರು ನನಗೆ ರಾತ್ರಿ ಠಾಣಾ ಪ್ರಭಾರೆಯಾಗಿ ನೇಮಕ ಮಾಡಿದ್ದು, ಅದರಂತೆ ನಾನು ಠಾಣೆಯಲ್ಲಿ ರಾತ್ರಿ 8.00 ಗಂಟೆಟೆ ಹಾಜರಾಗಿದ್ದು, ಅದೇ ದಿನ ರಾತ್ರಿ 9.00 ಗಂಟೆಗೆ ಚಾಸಾ-1 ರವರು, ಆರೋಪಿತರನ್ನು ಹಾಗೂ ಮಾಲುಗಳನ್ನು ಹಾಗೂ ಪಂಚನಾಮೆಯೊಂದಿಗೆ ಠಾಣೆಗೆ ಹಾಜರಾಗಿ ನೀಡಿದ

ವರದಿಯನ್ನು ಪಡೆದುಕೊಂಡು ಠಾಣಾ ಮೊಕದ್ದಮೆ ಸಂಃ 87/2019 ರಲ್ಲಿ ಭಾರತ ದಂಡ ಸಂಹಿತೆ ಕಲಂ 399, 402 ರಡಿಯಲ್ಲಿ ಪ್ರಕರಣವನ್ನು ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟಿರುತ್ತೇನೆ. ಸಾಕ್ಷಿಯು ವರದಿಯನ್ನು ನೋಡಿ ಗುರುತಿಸಿದ್ದು, ಸದರಿ ವರದಿಯನ್ನು **ನಿಪಿ 7** ಎಂದು, ಸಾಕ್ಷಿಯ ಸಹಿಯನ್ನು ನಿಪಿ **7(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು, ಸದರಿ ವರದಿಯನ್ನು **ನಿಪಿ 8** ಎಂದು, ಸಾಕ್ಷಿಯ ಸಹಿಯನ್ನು ನಿಪಿ **8(ಎ)** ಎಂದು ಗುರುತಿಸಲಾಯಿತು.

ನಂತರ ಅಮಾನತ್ತು ಪಡಿಸಿಕೊಂಡ ಮಾಲುಗಳನ್ನು ಪಿ.ಎಫ್ ನಂಃ 65/2019 ರಲ್ಲಿ ನಮೂದಿಸಿ ನ್ಯಾಯಾಲಯಕ್ಕೆ ಕಳುಹಿಸಿದ್ದು, ನಂತರ 1 ಮತ್ತು 2 ನೇ ಆರೋಪಿತರನ್ನು ವಿಚಾರಣೆ ಮಾಡಿ ಅವರ ಸ್ವಇಚ್ಛಾ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ನಂತರ ಆರೋಪಿತರಿಗೆ ದಸ್ತಗಿರಿ ಕ್ರಮ ಜರುಗಿಸಿ ರಿಮ್ಯಾಂಡ್ ಅರ್ಜಿಯನ್ನು ತಯಾರಿಸಿ ಠಾಣಾ ಸಿಬ್ಬಂದಿಯ ಮೂಲಕ ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ನಂತರ ಪಂಚರಾದ ಚಾಸಾ-2, ಚಾಸಾ-3 ಹಾಗೂ ಚಾಸಾ-4 ರಿಂದ ಚಾಸಾ-8 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಚಾಸಾ-2 ರವರು ನನ್ನ ಮುಂದೆ ನಿಪಿ 2 ರಂತೆ, ಚಾಸಾ-3 ರವರು ನನ್ನ ಮುಂದೆ ನಿಪಿ 5 ರಂತೆ ಹೇಳಿಕೆಗಳನ್ನು ನೀಡಿರುತ್ತಾರೆ. ನಾನು ನ್ಯಾಯಾಲಯಕ್ಕೆ ಕಳುಹಿಸಿದಂತಹ ಮುದ್ದೆ ಮಾಲುಗಳು **ಎರಡು ದೊಣ್ಣೆ, ಒಂದು ಕಬ್ಬಿಣದ ಮಚ್ಚು, ಒಂದು ಕಬ್ಬಿಣದ ರಾಡು, ಒಂದು ಸ್ಯಾಮ್ ಸಂಗ್ ಕೀಪ್ಯಾಡ್ ಮೊಬೈಲ್** ಗಳನ್ನು ನೋಡುತ್ತಿದ್ದು, ಅವುಗಳನ್ನು ಕ್ರಮವಾಗಿ **ಮು. ಮಾ 2 ರಿಂದ** 5 ಎಂದು ಗುರುತಿಸಲಾಯಿತು.

SC: 36/2020
PW:05 CW: 12

ನಂತರ ದಿಃ 10.05.2019 ರಂದು ಟಿ.ಎನ್‌–66–ಇ–2107 ಪಲ್ಸರ್ ವಾಹನದ ಮಾಲೀಕರಾದ ಚಾಸಾ–10 ರವರು ಠಾಣೆಗೆ ಹಾಜರಾಗಿದ್ದು, ಅವರನ್ನು ವಿಚಾರಣೆ ಮಾಡಿ ವಾಹನದ ದಾಖಲಾತಿಗಳನ್ನು ಪಡೆದು ಪರಿಶೀಲಿಸಿ, ನಂತರ ಅವರಿಂದ ಇಡೆಂನಿಟಿ ಬಾಂಡ್ ಪಡೆದುಕೊಂಡು ಸದರಿ ವಾಹನವನ್ನು ಅವರ ವಶಕ್ಕೆ ನೀಡಿರುತ್ತೇನೆ. ಸಾಕ್ಷಿಯು ಇಡೆಂನಿಟಿ ಬಾಂಡ್ ನೋಡಿ ಗುರುತಿಸಿದ್ದು, ಅದನ್ನು ಈಗಾಗಲೆ ನಿಪಿ 6 ಎಂದು ಗುರುತಿಸಲಾಗಿದ್ದು ಸಾಕ್ಷಿ ಸಹಿಯನ್ನು **ನಿಪಿ 6(ಎ)** ಎಂದು ಗುರುತಿಸಲಾಯಿತು. ನಂತರ ಚಾಸಾ–10 ರವರ ಹೇಳಿಕೆಯನ್ನು ಪಡೆದಕೊಂಡಿರುತ್ತೇನೆ. ದಿಃ 10.06.2019 ರಂದು ಚಾಸಾ–9 ರವರು ಟಿ.ಎನ್‌–23–ಸಿಸಿ–8224 ನೇ ವಾಹನದ ಮಾಲೀಕರು ಠಾಣೆಗೆ ಹಾಜರಾಗಿದ್ದು, ಅವರ ಹೇಳಿಕೆಯನ್ನು ಪಡೆದುಕೊಂಡು, ವಾಹನದ ದಾಖಲಾತಿಗಳನ್ನು ಪಡೆದುಕೊಂಡು, ಸದರಿ ವಾಹನವನ್ನು ಇಡೆಂನಿಟಿ ಬಾಂಡ್ ಪಡೆದುಕೊಂಡು ಅವರ ವಶಕ್ಕೆ ನೀಡಿರುತ್ತೇನೆ. ಚಾಸಾ–9 ರವರು ನನ್ನ ಮುಂದೆ ನಿಪಿ 4 ರಂತೆ ಹೇಳಿಕೆಯನ್ನು ನೀಡಿರುತ್ತಾರೆ. ಇಡೆಂನಿಟಿ ಬಾಂಡ್ ನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೆ ನಿಪಿ 3 ಎಂದು ಗುರುತಿಸಲಾಗಿದ್ದು, ಸಾಕ್ಷಿ ಸಹಿಯನ್ನು **ನಿಪಿ 3(ಬಿ)** ಎಂದು ಗುರುತಿಸಲಾಯಿತು.

1 ನೇ ಆರೋಪಿಯು ನನ್ನ ಮುಂದೆ ಸ್ವಇಚ್ಛಾ ಹೇಳಿಕೆ ನೀಡಿ ಅದಕ್ಕೆ ಸಹಿ ಮಾಡಿರುತ್ತಾರೆ. ಸಾಕ್ಷಿಯು ತೋರಿಸಿದ 1 ನೇ ಆರೋಪಿಯ ಸಹಿಯನ್ನು ನಿಪಿ 9 ಎಂದು, ಸಾಕ್ಷಿಯ ಸಹಿಯನ್ನು ನಿಪಿ 9(ಎ ) ಎಂದು ಗುರುತಿಸಲಾಯಿತು.

ದಿಃ 30.06.2019 ರಂದು ಈ ಕೇಸಿನ ತನಿಖೆಯನ್ನು ಪೂರ್ಣಗೊಳಿಸಿ 1 ಮತ್ತು 2 ನೇ ಆರೋಪಿತರ ವಿರುದ್ದ ಅಪರಾಧವೆಸಗಿರುತ್ತಾರೆ ಎಂದು ಸಾಕಷ್ಟು ಸಾಕ್ಷ್ಯಧಾರಗಳು

ಕಂಡುಬಂದಿದ್ದರಿಂದ ಆರೋಪಿತರ ವಿರುದ್ಧ ನ್ಯಾಯಾಲಯಕ್ಕೆ ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ. 3 ರಿಂದ 5 ನೇ ಆರೋಪಿತರು ಪತ್ತೆಯಾಗದೇ ಇರುವುದರಿಂದ, ಪತ್ತೆಯಾದ ನಂತರ ನ್ಯಾಯಾಲಯಕ್ಕೆ ಹೆಚ್ಚುವರಿ ದೋಷರೋಪಣಾ ಪಟ್ಟಿಯನ್ನು ಸಲ್ಲಿಸಲಾಗುವುದು ಎಂದು ವಿನಂತಿಕೊಳ್ಳಲಾಗಿರುತ್ತದೆ.

ಈ ದಿನ ನ್ಯಾಯಾಲಯದ ಮುಂದೆ ವಿ ಸಿ ಮುಖಾಂತರ ಹಾಜರುಪಡಿಸಿದ ಆರೋಪಿಯು ನಾನು ದಸ್ತಗಿರಿ ಮಾಡಿದಂತಹ ಆರೋಪಿಯು ಇರುತ್ತಾನೆ.

**<u>ಪಾಟೀ ಸವಾಲುಃ 1 ನೇ ಆರೋಪಿ ಪರ ಶ್ರೀ .ಎಂ.ವಿ ವಕೀಲರಿಂದಃ</u>**

ಚಾಸಾ-9 ಮತ್ತು ಚಾಸಾ-10 ರವರಿಗೆ ಸೇರಿದ ದ್ವಿಚಕ್ರ ವಾಹನಗಳು ಈ ಕೇಸಿಗೆ ಸಂಬಂಧಪಟ್ಟಿರುವಂತಹ ವಾಹನಗಳು ಇರುತ್ತವೆಯೋ ಅಥವಾ ಬೇರೆ ಪ್ರಕರಣಗಳಲ್ಲಿ ಕಳ್ಳತನವಾದಂತಹ ವಾಹನಗಳು ಇರುತ್ತವೆಯೋ ಎನ್ನುವುದನ್ನು ತನಿಖೆ ಮಾಡಿದ್ದೀರಾ ಎಂದರೆ ಸಾಕ್ಷಿಯು ಚಾಸಾ-9 ಮತ್ತು ಚಾಸಾ-10 ರವರು ಠಾಣೆಗೆ ಹಾಜರಾಗಿ ಹೇಳಿಕೆ ನೀಡಿದ್ದು, ಅವುಗಳು ಕಳ್ಳತನವಾಗಿದ್ದವು ಎಂದು ತಿಳಿಸಿರುತ್ತಾರೆ. ಚಾಸಾ-9 ಮತ್ತು ಚಾಸಾ-10 ರವರು ತಮ್ಮ ವಾಹನಗಳು ಕಳ್ಳತನವಾದ್ದರಿಂದ ಠಾಣೆಯಲ್ಲಿ ನೀಡಿದಂತಹ ದೂರಿಗೆ ಸಂಬಂಧಿಸಿತಂಹ ದಾಖಲಾತಿಗಳನ್ನು ನಾನು ಈ ಪ್ರಕರಣದಲ್ಲಿ ಚಾಸಾ-9 ಮತ್ತು ಚಾಸಾ-10 ರವರು ಹಾಜರುಪಡಿಸರುತ್ತಾರೆ. ಸದರಿ ದೂರುಗಳಿಗೆ ಸಂಬಂಧಿಸಿದಂತೆ ವಾಹನಗಳನ್ನು ಕಳ್ಳತನ ಮಾಡಿದಂತಹ ಆರೋಪಿತರ ಬಗ್ಗೆ ನಾನು ತನಿಖೆ ಮಾಡಿರುವುದಿಲ್ಲ. ಈ ಪ್ರಕರಣದಲ್ಲಿ ನಾನು ಯಾವುದೇ ತನಿಖೆ ಮಾಡಿರುವುದಿಲ್ಲ ಮತ್ತು ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದ ಕೊಂಡಿರುವುದಿಲ್ಲ ಮತ್ತು ಯಾವುದೇ ವಾಹನಗಳನ್ನು ವಶಕ್ಕೆ ಪಡೆದುಕೊಂಡಿರುವುದಿಲ್ಲ,

ಚಾಸಾ–1 ರವರು ನಮ್ಮ ಮೇಲಾಧಿಕಾರಿಯಾಗಿರುವುದರಿಂದ ಅವರ ಮಾತು ಕೇಳಿ ಸಹಾಯ ಮಾಡಲು ಆರೋಪಿತರ ವಿರುದ್ಧ ಸುಳ್ಳು ಪ್ರಕರಣವನ್ನು ದಾಖಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ. ಚಾಸಾ–2 ಮತ್ತು ಚಾಸಾ–3 ರವರು ನನ್ನ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿ ನಮ್ಮ ಮುಂದೆ ಸ್ವಇಚ್ಛಾ ಹೇಳಿಕೆಯನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಆರೋಪಿಯನ್ನು ಬೆದರಿಸಿ ನಿಪಿ 9 ರಂತೆ ಖಾಲಿ ಹಾಳೆಯ ಮೇಲೆ ಸಹಿ ಪಡೆದುಕೊಂಡಿರುತ್ತೇನೆ ಹಾಗೂ ಆರೋಪಿ ಯಾವುದೇ ಹೇಳಿಕೆ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಮುದ್ದೆ ಮಾಲು 2 ರಿಂದ 5 ಮತ್ತು ಅರೋಪಿಗೂ ಹಾಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ಮುದ್ದೆ ಮಾಲುಗಳನ್ನು ಈ ಪ್ರಕರಣಕ್ಕಾಗಿ ಸೃಷ್ಟಿ ಮಾಡಿದ್ದು, ಆರೋಪಿಗೂ ಮತ್ತು ಮುದ್ದೆಮಾಲಿಗೂ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ಠಾಣೆಯ ಅಂಕಿ ಅಂಶಗಳಿಗೋಸ್ಕರ ಆರೋಪಿತನ ವಿರುದ್ಧ ನಮ್ಮ ಮೇಲಾಧಿಕಾರಿಗಳ ಮಾತು ಕೇಳಿ ಸುಳ್ಳು ಪ್ರಕರಣವನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. 1ನೇ ಆರೋಪಿ ದರೋಡೆಗಾಗಿ ಹೊಂಚು ಹಾಕುವ ಪ್ರಕರಣದಲ್ಲಿ ಭಾಗಿಯಾಗಿರುವುದಿಲ್ಲ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಮು. ಮಾ 1 ರಲ್ಲಿರುವ ದ್ವಿಚಕ್ರ ವಾಹನವನ್ನು ಮತ್ತು ಚಾಸಾ–10 ರವರಿಗೆ ಸೇರಿದ ದ್ವಿಚಕ್ರ ವಾಹನವನ್ನು ನಾನು ಆರೋಪಿಯಿಂದ ವಶಕ್ಕೆ ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ.

SC: 36/2020
PW:05 CW: 12

**<u>ಮರುವಿಚಾರಣೆಃ</u> ಇಲ್ಲ**
**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ದಿನಾಂಕ** 21.07.2026 **ರಂದು ಬೆರಳಚ್ಚುಗಾರರಿಂದ ಬೆರಳಚ್ಚು ಮಾಡಿಸಲಾಯಿತು** )

ಓದಿ ಹೇಳಿ ಕೇಳಿ ಸರಿ ಇದೆ

sd/-
**(ಸಿದ್ದಣ್ಣ.ಬಿ.ಹಂದ್ರಾಳ)**
ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಬಳ್ಳಾಪುರ.